OCTOBER 15, 2026
ALL INDIA RADIO- DHARWAD
PRADESH SAMACHARA (KANNADA) 7:05 AM

## ಮುಖ್ಯಾಂಶಗಳು

- **ಕಬ್ಬು ಬೆಳೆಗಾರರ ಸಮಸ್ಯೆಗಳ** ಸಮಗ್ರ ಅಧ್ಯಯನ, ಪರಿಹಾರ ಕ್ರಮಗಳ ಶಿಫಾರಸ್ಸಿಗೆ ಜಂಟಿ ಸಮಿತಿ ರಚಿಸಿದ ಕೇಂದ್ರ ಸರ್ಕಾರ.

- **ಬೆಂಗಳೂರಿಗೆ ಸೀಮಿತವಾಗದೆ** ಇತರೆ ಜಿಲ್ಲೆಗಳಲ್ಲೂ ಹೂಡಿಕೆ ಮಾಡಿ: ಝೆಕ್ ಗಣರಾಜ್ಯದ ಉಪಪ್ರಧಾನಿ ನಿಯೋಗಕ್ಕೆ ಮುಖ್ಯಮಂತ್ರಿ ಮನವಿ.

- **ರಾಜ್ಯದ ಬರ ಪರಿಸ್ಥಿತಿ ಸಮರ್ಥವಾಗಿ** ಎದುರಿಸಲು ಸರ್ಕಾರದಿಂದ ಅಗತ್ಯ ಕ್ರಮ– ಕಂದಾಯ ಸಚಿವರ ಹೇಳಿಕೆ.

- **ಮಕ್ಕಳ ಸುರಕ್ಷತೆ,** ಭದ್ರ, ಹಸನಾದ ಬಾಲ್ಯ ರೂಪಿಸುವುದು ಸರ್ಕಾರದ ಆದ್ಯತೆ– ಗೃಹ ಸಚಿವರ ಭರವಸೆ.

## ಈಗ ವಾರ್ತೆಗಳ ವಿವರ

*******

**ಸಕ್ಕರೆಗೆ ಕನಿಷ್ಠ ಮಾರಾಟ ಬೆಲೆ ಏರಿಸುವುದು,** ಪ್ರತಿ ಟನ್‌ಗೆ 5,500 ರಿಂದ 6000 ರೂಪಾಯಿ ದರ ನಿಗದಿ ಮಾಡುವುದು ಸೇರಿದಂತೆ ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಬೆಂಗಳೂರು ಪುಣೆ ರಾಷ್ಟ್ರೀಯ ಹೆದ್ದಾರಿಯಲ್ಲಿ ರೈತ ಸಂಘ ಮತ್ತು ಹಸಿರು ಸೇನೆ ನೇತೃತ್ವದಲ್ಲಿ ನಡೆಸುತ್ತಿದ್ದ ಹೆದ್ದಾರಿ ಅಹೋರಾತ್ರಿ ಬಂದ್ ಪ್ರತಿಭಟನೆ ಹಿಂಪಡೆದು, ನಿನ್ನೆ ಹುಬ್ಬಳ್ಳಿಯವರೆಗೆ ಪಾದಯಾತ್ರೆ ನಡೆಸಲಾಯಿತು.  ಈ ಮಧ್ಯೆ ಕಬ್ಬು ಬೆಳೆಗಾರರ ಸಮಸ್ಯೆಗಳ ಸಮಗ್ರ ಅಧ್ಯಯನ ನಡೆಸಿ ಪರಿಹಾರ ಕ್ರಮಗಳನ್ನು ಶಿಫಾರಸು ಮಾಡಲು ಕೇಂದ್ರ ಸರ್ಕಾರ ನೀತಿ ಆಯೋಗದ ಮಾಜಿ ಸದಸ್ಯ ಪ್ರೊ. ರಮೇಶ್ ಚಂದ್ ಅಧ್ಯಕ್ಷತೆಯಲ್ಲಿ ಜಂಟಿ ಸಮಿತಿ ರಚಿಸಿದೆ.

ಈ ಕುರಿತು ಪ್ರಕಟಣೆ ನೀಡಿರುವ ಕೇಂದ್ರ ಸಚಿವ ಪ್ರಲ್ಹಾದ ಜೋಶಿ, ದೆಹಲಿಯಲ್ಲಿ ಕಬ್ಬು ಬೆಳೆಗಾರರ ನಿಯೋಗದೊಂದಿಗೆ ನಡೆದ ಉನ್ನತ ಮಟ್ಟದ ಸಭೆಯ ಎರಡು ದಿನಗಳಲ್ಲೇ ಕೇಂದ್ರ ಸರ್ಕಾರ ಸಮಿತಿ ರಚಿಸಿ ಕ್ರಮ ಕೈಗೊಂಡಿದ್ದು, ಸಮಿತಿ ಕಬ್ಬು ಬೆಳೆಗಾರರ ಸಮಸ್ಯೆಗಳನ್ನು ಕೂಲಂಕಷವಾಗಿ ಅಧ್ಯಯನ ಮಾಡಿ, ರೈತರ ಆತಂಕ ನಿವಾರಣೆ ಹಾಗೂ ಬೇಡಿಕೆಗಳ ಈಡೇರಿಕೆಗೆ ಕೈಗೊಳ್ಳಬೇಕಾದ ಕ್ರಮಗಳ ಕುರಿತು ಕೇಂದ್ರ ಸರ್ಕಾರಕ್ಕೆ ಶಿಫಾರಸುಗಳನ್ನು ಸಲ್ಲಿಸಲಿದೆ ಎಂದು ತಿಳಿಸಿದ್ದಾರೆ.

*******

**ಬೆಂಗಳೂರು ದೇಶದ ತಂತ್ರಜ್ಞಾನ,** ಸಂಶೋಧನೆ ಮತ್ತು ಉದ್ಯಮಶೀಲತೆಯ ಪ್ರಮುಖ ಕೇಂದ್ರವಾಗಿದ್ದು, ರಾಜ್ಯದಲ್ಲಿ ಹೂಡಿಕೆಗೆ ವಿಫುಲ ಅವಕಾಶಗಳಿವೆ ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ ಹೇಳಿದ್ದಾರೆ. ಬೆಂಗಳೂರಿಗೆ ಭೇಟಿ ನೀಡಿದ ಝೆಕ್ ಗಣರಾಜ್ಯದ ಉಪ ಪ್ರಧಾನಮಂತ್ರಿ ಕಾರೆಲ್ ಹಾವ್ಲಿಕ್ ಅವರ ನೇತೃತ್ವದ ನಿಯೋಗವನ್ನುದ್ದೇಶಿಸಿ ಮಾತನಾಡಿದ ಅವರು, ಇನ್ವೆಸ್ಟ್ ಕರ್ನಾಟಕ, ಕರ್ನಾಟಕ ಉದ್ಯೋಗ ಮಿತ್ರ, ಮತ್ತು ಏಕ ಗವಾಕ್ಷಿ ವ್ಯವಸ್ಥೆಯ ಮೂಲಕ, ಆಸಕ್ತ ಕಂಪನಿಗಳಿಗೆ ಸೂಕ್ತ ಸ್ಥಳಗಳನ್ನು ಮೌಲ್ಯಮಾಪನ ಮಾಡಲು, ಸಂಬಂಧಿತ ಇಲಾಖೆಗಳೊಂದಿಗೆ ಸಂಪರ್ಕ ಸಾಧಿಸಲು ರಾಜ್ಯ ಸರ್ಕಾರ ಸಹಾಯ ಮಾಡುತ್ತಿದೆ ಎಂದರು. ರಾಜ್ಯದ ಇಂಧನ, ಅಟೊಮೊಬೈಲ್ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಹೂಡಿಕೆಗೆ ವಿಪುಲ ಅವಕಾಶಗಳಿವೆ, ಬೆಂಗಳೂರಿಗೆ ಸೀಮಿತವಾಗದೆ ಇತರೆ ಜಿಲ್ಲೆಗಳಲ್ಲೂ ಹೂಡಿಕೆ ಮಾಡುವಂತೆ ಮನವಿ ಮಾಡಿದ ಅವರು, ಕರ್ನಾಟಕ ಹಾಗೂ ಝೆಕ್ ಗಣರಾಜ್ಯದ ನಡುವಣ ಬಾಂಧವ್ಯ ಕೇವಲ ವ್ಯಾಪಾರಕ್ಕೆ ಮಾತ್ರ ಸೀಮಿತವಾಗದೆ ಶೈಕ್ಷಣಿಕ, ಕೌಶಲ್ಯ ಅಭಿವೃದ್ಧಿ ಪಾಲುದಾರಿಕೆಯಂಥ ಕ್ಷೇತ್ರಗಳಿಗೂ ವಿಸ್ತರಿಸುವ ಅವಕಾಶಗಳಿವೆ ಎಂದು ಮುಖ್ಯಮಂತ್ರಿ ಹೇಳಿದರು.

*******

**ರಾಜ್ಯದಲ್ಲಿ ಬರ ಪರಿಸ್ಥಿತಿಯನ್ನು ಸಮರ್ಥವಾಗಿ** ಎದುರಿಸಲು ಹಾಗೂ ಸಂಕಷ್ಟದಲ್ಲಿರುವ ರೈತರ ಹಿತ ಕಾಪಾಡಲು ಸರ್ಕಾರ ಅಗತ್ಯ ಕ್ರಮಗಳನ್ನು ಕೈಗೊಳ್ಳುತ್ತಿದೆ ಎಂದು ಕಂದಾಯ ಸಚಿವರೂ ಆಗಿರುವ ಉಪ ಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ ತಿಳಿಸಿದ್ದಾರೆ. ಈ ಕುರಿತು ಸಾಮಾಜಿಕ ಮಾಧ್ಯಮ ಎಕ್ಸ್‌ನಲ್ಲಿ ಸಂದೇಶ ಹಂಚಿಕೊಂಡಿರುವ ಅವರು, ಈಗಾಗಲೇ 217 ತಾಲೂಕುಗಳನ್ನು ಬರಪೀಡಿತ ಎಂದು ಘೋಷಿಸಲಾಗಿತ್ತು. ಇದೀಗ ವೈಜ್ಞಾನಿಕ ಮೌಲ್ಯಮಾಪನ ಹಾಗೂ ಸ್ಥಳ ಪರಿಶೀಲನೆಯ ಆಧಾರದಲ್ಲಿ ಹೊಸದಾಗಿ 9 ತಾಲ್ಲೂಕುಗಳನ್ನು ಬರಪೀಡಿತವೆಂದು ಘೋಷಿಸಿ ಆದೇಶ ಹೊರಡಿಸಲಾಗಿದೆ. ಇದರೊಂದಿಗೆ ರಾಜ್ಯದಲ್ಲಿ ಬರಪೀಡಿತ ತಾಲ್ಲೂಕುಗಳ ಸಂಖ್ಯೆ 226 ಕ್ಕೆ ಏರಿಕೆಯಾಗಿದೆ ಎಂದಿದ್ದಾರೆ. ಬರದಿಂದ ರೈತರ ಜೀವನೋಪಾಯಕ್ಕೆ ತೊಂದರೆಯಾಗದಂತೆ ನೋಡಿಕೊಳ್ಳುವುದು, ಬೆಳೆಹಾನಿಗೆ ಸೂಕ್ತ ಪರಿಹಾರ

ಒದಗಿಸುವುದು ಹಾಗೂ ಗ್ರಾಮೀಣ ಜನರ ಹಿತ ಕಾಯುವುದು ನಮ್ಮ ಸರ್ಕಾರದ ಆದ್ಯತೆಯಾಗಿದೆ ಎಂದು ಸಚಿವರು ತಿಳಿಸಿದ್ದಾರೆ.

*******

**ಮಕ್ಕಳ ಸುರಕ್ಷತೆ ಮತ್ತು** ಪ್ರತಿಯೊಂದು ಮಗುವಿಗೂ ಭದ್ರವಾದ, ಹಸನಾದ ಬಾಲ್ಯ ರೂಪಿಸುವುದು ಸರ್ಕಾರದ ಆದ್ಯತೆ ಎಂದು ಗೃಹ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ. ಸಾಮಾಜಿಕ ಮಾಧ್ಯಮದಲ್ಲಿ ಸಂದೇಶ ಹಂಚಿಕೊಂಡಿರುವ ಅವರು, ಮಕ್ಕಳನ್ನು ಭಿಕ್ಷಾಟನೆಗೆ ಅಥವಾ ಕಾನೂನುಬಾಹಿರ ಕೆಲಸಗಳಿಗೆ ಬಳಸಿಕೊಳ್ಳುವ ಯಾವುದೇ ಜಾಲಗಳ ವಿರುದ್ಧ ಕಠಿಣ ಕಾನೂನು ಕ್ರಮ ಮುಂದುವರಿಯಲಿದೆ ಎಂದಿದ್ದಾರೆ. ಹೊರರಾಜ್ಯಗಳಿಂದ ಅಪ್ರಾಪ್ತ ಮಕ್ಕಳನ್ನು ಕರೆತಂದು ಟ್ರಾಫಿಕ್ ಸಿಗ್ನಲ್‌ಗಳಲ್ಲಿ ಭಿಕ್ಷಾಟನೆಗೆ ತಳ್ಳುತ್ತಿದ್ದ ಅಮಾನವೀಯ ಜಾಲವನ್ನು, ಬೆಂಗಳೂರಿನ ಯಲಹಂಕ ವ್ಯಾಪ್ತಿಯಲ್ಲಿ ಪತ್ತೆಹಚ್ಚಿದ, ಸಿಸಿಬಿ ಮಹಿಳಾ ಸಂರಕ್ಷಣಾ ದಳ ಹಾಗೂ ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಜಂಟಿ ಕಾರ್ಯಾಚರಣೆ ಅತ್ಯಂತ ಶ್ಲಾಘನೀಯ ಎಂದು ಸಚಿವರು ಸಂದೇಶದಲ್ಲಿ ತಿಳಿಸಿದ್ದಾರೆ.

*******

**ಮಕ್ಕಳಿಗೆ ಗುಣಮಟ್ಟದ ಶಿಕ್ಷಣ** ಒದಗಿಸುವುದು ಸರ್ಕಾರದ ಪ್ರಮುಖ ಆದ್ಯತೆಯಾಗಿದ್ದು, ಕರ್ನಾಟಕ ಪಬ್ಲಿಕ್ ಶಾಲೆಗಳ ಮೂಲಕ ರಾಜ್ಯದಲ್ಲಿ ಶಿಕ್ಷಣ ಕ್ಷೇತ್ರದಲ್ಲಿ ಮಹತ್ವದ ಬದಲಾವಣೆ ತರಲಾಗುತ್ತಿದೆ ಎಂದು ಶಿಕ್ಷಣ ಸಚಿವ ಮಧು ಬಂಗಾರಪ್ಪ ತಿಳಿಸಿದ್ದಾರೆ. ನಾಡಹಬ್ಬ ಮೈಸೂರು ದಸರಾ ಮಹೋತ್ಸವದ ಅಂಗವಾಗಿ ಆಯೋಜಿಸಿದ್ದ ಮಕ್ಕಳ ದಸರಾ ಕಾರ್ಯಕ್ರಮಕ್ಕೆ ಚಾಲನೆ ನೀಡಿ, ಮಾತನಾಡಿದ ಅವರು, ಮೊದಲ ಹಂತದಲ್ಲಿ ಒಂದು ಸಾವಿರದ 250 ಕೆಪಿಎಸ್ ಶಾಲೆಗಳನ್ನು ಸ್ಥಾಪಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. ಕೆಪಿಎಸ್ ಶಾಲೆಗಳು, ಖಾಸಗಿ ಶಾಲೆಗಳಿಗೆ ಪೈಪೋಟಿ ನೀಡುವಂತ ಗುಣಮಟ್ಟದ ಶಿಕ್ಷಣ ಮತ್ತು ಅಗತ್ಯ ಸೌಲಭ್ಯಗಳನ್ನು ಹೊಂದಿರಲಿವೆ ಎಂದು ಸಚಿವರು ಹೇಳಿದರು.

*******

**ವಿಶ್ವವಿಖ್ಯಾತ ಮೈಸೂರು ದಸರಾ** ಮಹೋತ್ಸವದ ಪ್ರಮುಖ ಆಕರ್ಷಣೆಯಾದ ಜಂಬೂಸವಾರಿಯಲ್ಲಿ ಚಿನ್ನದ ಅಂಬಾರಿ ಹೊರುವ ಜವಾಬ್ದಾರಿಯನ್ನು ಈ ಬಾರಿ 'ಪ್ರಶಾಂತ' ಆನೆಗೆ ವಹಿಸಲಾಗಿದೆ. ಮೈಸೂರಿನಲ್ಲಿ ಸುದ್ದಿಗೋಷ್ಠಿಯಲ್ಲಿ ಈ ವಿಷಯ ತಿಳಿಸಿದ ಜಿಲ್ಲಾ ಉಸ್ತುವಾರಿ ಸಚಿವ ಡಾ. ಯತೀಂದ್ರ ಸಿದ್ದರಾಮಯ್ಯ, ಆನೆಗಳ ಆರೋಗ್ಯ ಮತ್ತು ಸಾಮರ್ಥ್ಯವನ್ನು ಸೂಕ್ಷ್ಮವಾಗಿ ಗಮನಿಸಿ ಒಟ್ಟು 13 ಆನೆಗಳನ್ನು ಆಯ್ಕೆ ಮಾಡಲಾಗಿದೆ. ಶಾಂತ ಸ್ವಭಾವದ 'ಪ್ರಶಾಂತ' ಆನೆಯು ಅರಣ್ಯಾಧಿಕಾರಿಗಳು ನೀಡಿದ ಎಲ್ಲಾ ತಾಲೀಮುಗಳಲ್ಲೂ ಯಶಸ್ವಿಯಾಗಿ ತೇರ್ಗಡೆಯಾಗಿರುವ ಹಿನ್ನೆಲೆಯಲ್ಲಿ, ಈ ಬಾರಿ ಅಂಬಾರಿ ಹೊತ್ತು

ಸಾಗುವ ಹೆಗ್ಗಳಿಗೆ ಪಾತ್ರವಾಗಿದೆ ಎಂದರು. ದಸರಾ ಜಂಬೂಸವಾರಿ ಮೆರವಣಿಗೆಯಲ್ಲಿ ಪಾಲ್ಗೊಳ್ಳುವಂತೆ ಇತರ ರಾಜ್ಯಗಳ ಮುಖ್ಯಮಂತ್ರಿಗಳನ್ನು ಆಹ್ವಾನಿಸಲಾಗಿದ್ದು, ನೆರೆಯ ಕೇರಳ ಹಾಗೂ ತೆಲಂಗಾಣ ರಾಜ್ಯಗಳ ಮುಖ್ಯಮಂತ್ರಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಲು ಸಮ್ಮತಿ ಸೂಚಿಸಿದ್ದಾರೆ ಎಂದು ಸಚಿವ ಯತೀಂದ್ರ ಸಿದ್ದರಾಮಯ್ಯ ತಿಳಿಸಿದರು.

***********

**ಈಗ ಪ್ರಕಟಣೆ ನಂತರ ಪ್ರದೇಶ ಸಮಾಚಾರ ಮುಂದುವರಿಯುವುದು..**
**ಪ್ರಕಟಣೆ–32 ಸೆಕೆಂಡ್ಸ್**
**ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ**
***********

**'ಜನ ಸೇವೆಯಿಂದ ದೇಶ ಸೇವೆ'** ಎಂಬ ಮಂತ್ರದಡಿ ಹಾಗೂ ಜನರ ಏಳಿಗೆಯ ಅಚಲ ಬದ್ಧತೆಯೊಂದಿಗೆ ಕೂಡಿರುವ ಸಾರ್ವಜನಿಕ ಸೇವೆಯ 25 ವರ್ಷಗಳ ಪಯಣವನ್ನು ಪ್ರಧಾನಿ ನರೇಂದ್ರ ಮೋದಿ ಪೂರೈಸಿದ್ದಾರೆ. ಸೇವೆ ಮತ್ತು ಸುಶಾಸನದ ದೂರದೃಷ್ಟಿಯೊಂದಿಗೆ ಸರ್ಕಾರ, 2047ರ ವೇಳೆಗೆ 'ವಿಕಸಿತ ಭಾರತ' ಗುರಿ ಸಾಧನೆಯತ್ತ ಸಾಗುತ್ತಿದೆ. ಅದರ ಭಾಗವಾಗಿ, ಹಲವು ವಲಯಗಳಲ್ಲಿ ಕೈಗೊಂಡ ಮಹತ್ವದ ಸುಧಾರಣೆಗಳ ಕುರಿತ ಸರಣಿಯನ್ನು ಆಕಾಶವಾಣಿ ಪ್ರಸಾರ ಮಾಡುತ್ತಿದೆ. ಇಂದಿನ ಆವೃತ್ತಿಯಲ್ಲಿ 'ಜಲ ಜೀವನ ಮಿಷನ್' ಯೋಜನೆ ಕುರಿತ ಒಂದು ವರದಿ ಇಲ್ಲಿದೆ. **2019 ರಲ್ಲಿ ಆರಂಭಗೊಂಡ** ಜಲಜೀವನ ಮಿಷನ್ ಯೋಜನೆ ಗ್ರಾಮೀಣ ಪ್ರದೇಶದ ಪ್ರತಿ ಮನೆಗೂ ನಲ್ಲಿಯ ಮೂಲಕ ಶುದ್ಧ, ವಿಶ್ವಾಸಾರ್ಹ ಕುಡಿಯುವ ನೀರು ಒದಗಿಸುವ ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆ. ಯೋಜನೆ ಆರಂಭಗೊಂಡ ಸಮಯದಲ್ಲಿ 3.23 ಕೋಟಿ ಗ್ರಾಮೀಣ ಪ್ರದೇಶದ ಮನೆಗಳಿಗೆ ನಲ್ಲಿ ಸಂಪರ್ಕ ಇತ್ತು. ಜೂನ್ 2026 ರ ಹೊತ್ತಿಗೆ ಇದು 16 ಕೋಟಿಗೆ ತಲುಪಿತು. ಏಳು ವರ್ಷಗಳಲ್ಲಿ 12.6 ಕೋಟಿಯಷ್ಟು ಹೆಚ್ಚಳ ಕಂಡಿತು. ಈಗ ಈ ಯೋಜನೆಯನ್ನು 2028 ರವರೆಗೆ ವಿಸ್ತರಿಸಲಾಗಿದ್ದು, ಗುಣಮಟ್ಟದ ಸೇವೆ ಮತ್ತು ಸುಸ್ಥಿರ ಅಭಿವೃದ್ಧಿಗೆ ಈ ಯೋಜನೆಯಡಿ ಹೆಚ್ಚಿನ ಒತ್ತು ನೀಡಲಾಗಿದೆ. ಆದರೆ, ಜಲ್ ಜೀವನ್ ಮಿಷನ್ ಕೇವಲ ಕೊಳವೆಗಳನ್ನು ಅಳವಡಿಸುವುದಕ್ಕೆ ಸೀಮಿತವಾಗಿಲ್ಲ. ಇದರ ವಿನ್ಯಾಸವು ನೀರಿನ ಮೂಲಗಳ ಮರುಪೂರಣ, ಮಳೆನೀರು ಕೊಯ್ಲು, ಬಳಕೆಯಾದ ನೀರು ನಿರ್ವಹಣೆ ಮತ್ತು ಸಂರಕ್ಷಣೆಯನ್ನು ಒಳಗೊಂಡಿದೆ. ಈ ಯೋಜನೆಯಡಿ 5 ಲಕ್ಷಕ್ಕೂ ಹೆಚ್ಚು 'ಪಾನಿ ಸಮಿತಿ'ಗಳನ್ನು ರಚಿಸಲಾಗಿದ್ದು, ಇದರಲ್ಲಿ ಕನಿಷ್ಠ ಶೇಕಡಾ 50 ರಷ್ಟು ಮಹಿಳಾ ಸದಸ್ಯರಿದ್ದಾರೆ; ನೀರಿನ ಗುಣಮಟ್ಟವನ್ನು ಪರೀಕ್ಷಿಸಲು 24.8 ಲಕ್ಷಕ್ಕೂ ಹೆಚ್ಚು ಮಹಿಳೆಯರಿಗೆ ತರಬೇತಿ ನೀಡಲಾಗಿದ್ದು, ಇದರ ದೀರ್ಘಕಾಲೀನ ಪರಿಣಾಮವು ಅತ್ಯಂತ ಮಹತ್ವದ್ದಾಗಿದೆ; ಸಾರ್ವತ್ರಿಕ ನಲ್ಲಿ ನೀರಿನ ಸಂಪರ್ಕವು ಪ್ರತಿದಿನ 5.5

ಕೋಟಿ ಗಂಟೆಗಳ ಸಮಯವನ್ನು ಉಳಿಸಬಲ್ಲದು ಎಂದು ವಿಶ್ವ ಆರೋಗ್ಯ ಸಂಸ್ಥೆ (WHO) ಅಂದಾಜಿಸಿದೆ, ಜಲ್ ಜೀವನ್ ಮಿಷನ್ ಕುಡಿಯುವ ನೀರನ್ನು ದೈನಂದಿನ ಹೊರೆಯಿಂದ ಬದಲಾಯಿಸಿ, ಆರೋಗ್ಯ, ಘನತೆ, ಸಮಯ ಮತ್ತು ಅವಕಾಶಗಳ ಭದ್ರ ಬುನಾದಿಯನ್ನಾಗಿ ಪರಿವರ್ತಿಸುತ್ತಿದೆ.

*******

**ಕ್ಯಾಲಿಫೋರ್ನಿಯಾದ ಸ್ಟ್ಯಾನ್ ಫೋರ್ಡ್** ವಿಶ್ವವಿದ್ಯಾಲಯ ಪ್ರಕಟಿಸಿರುವ ವಿಶ್ವದ ಶ್ರೇಷ್ಠ ವಿಜ್ಞಾನಿಗಳ ಪಟ್ಟಿಯಲ್ಲಿ ದಾವಣಗೆರೆ ವಿಶ್ವವಿದ್ಯಾನಿಲಯದ ಐವರು ಪ್ರಾಧ್ಯಾಪಕರು ಸ್ಥಾನ ಪಡೆದಿದ್ದಾರೆ. ಸಂಶೋಧನೆ, ಸಂಶೋಧನಾ ಪ್ರಕಟಣೆಗಳು, ಅವುಗಳ ಮಹತ್ವ ಮತ್ತು ಮೌಲ್ಯಗಳು ಸೇರಿದಂತೆ ಇನ್ನಿತರ ಮಾನದಂಡಗಳನ್ನು ಆಧರಿಸಿ, ಈ ಪಟ್ಟಿಯನ್ನು ಸಿದ್ಧಪಡಿಸಲಾಗಿದ್ದು, ಗಣಿತಶಾಸ್ತ್ರ ಅಧ್ಯಯನ ವಿಭಾಗದ ಪ್ರಾಧ್ಯಾಪಕ ಪ್ರೊ.ಬಿ.ಸಿ.ಪ್ರಸನ್ನಕುಮಾರ, ಪ್ರೊ.ಯು.ಎಸ್.ಮಹಾಬಲೇಶ್ವರ, ಪ್ರೊ.ಡಿ.ಜಿ. ಪ್ರಕಾಶ್ ಮತ್ತು ಸಸ್ಯಶಾಸ್ತ್ರ ಅಧ್ಯಯನ ವಿಭಾಗದ ಪ್ರಾಧ್ಯಾಪಕ ಪ್ರೊ. ಗೋವಿಂದಪ್ಪ ಸತತ ಐದನೇ ಬಾರಿ ಸ್ಟ್ಯಾನ್ ಫೋರ್ಡ್ ವಿಶ್ವವಿದ್ಯಾಲಯ ಪಟ್ಟಿನಲ್ಲಿ ಸ್ಥಾನ ಪಡೆದಿದ್ದರೆ, ಗಣಿತಶಾಸ್ತ್ರ ಅಧ್ಯಯನ ವಿಭಾಗದ ಡಾ.ಕೆ.ಎಸ್.ರಘುನಾಥ ಈ ಬಾರಿ ಆಯ್ಕೆಯಾಗಿದ್ದಾರೆ ಎಂದು ದಾವಣಗೆರೆ ವಿಶ್ವವಿದ್ಯಾಲಯದ ಕುಲಪತಿ ಪ್ರೊ.ಬಿ.ಇ.ರಂಗಸ್ವಾಮಿ ತಿಳಿಸಿದ್ದಾರೆ.

*******

## ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು

**ಕಬ್ಬು ಬೆಳೆಗಾರರ ಸಮಸ್ಯೆಗಳ** ಸಮಗ್ರ ಅಧ್ಯಯನ, ಪರಿಹಾರ ಕ್ರಮಗಳ ಶಿಫಾರಸ್ಸಿಗೆ ಜಂಟಿ ಸಮಿತಿ ರಚಿಸಿದ ಕೇಂದ್ರ ಸರ್ಕಾರ.

**ಬೆಂಗಳೂರಿಗೆ ಸೀಮಿತವಾಗದೆ** ಇತರೆ ಜಿಲ್ಲೆಗಳಲ್ಲೂ ಹೂಡಿಕೆ ಮಾಡಿ: ಝೆಕ್ ಗಣರಾಜ್ಯದ ಉಪಪ್ರಧಾನಿ ನಿಯೋಗಕ್ಕೆ ಮುಖ್ಯಮಂತ್ರಿ ಮನವಿ.

**ರಾಜ್ಯದ ಬರ ಪರಿಸ್ಥಿತಿ ಸಮರ್ಥವಾಗಿ** ಎದುರಿಸಲು ಸರ್ಕಾರದಿಂದ ಅಗತ್ಯ ಕ್ರಮ– ಕಂದಾಯ ಸಚಿವರ ಹೇಳಿಕೆ.

**ಮಕ್ಕಳ ಸುರಕ್ಷತೆ,** ಭದ್ರ, ಹಸನಾದ ಬಾಲ್ಯ ರೂಪಿಸುವುದು ಸರ್ಕಾರದ ಆದ್ಯತೆ– ಗೃಹ ಸಚಿವರ ಭರವಸೆ.

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ ಈ ಬೆಳಿಗ್ಗೆ 7 ಗಂಟೆ 35 ನಿಮಿಷಕ್ಕೆ

****END****